RNU AIR DHARWAD

# OCTOBER 26, 2025
# AKASHAVANI - DHARWAD
# PRADESH SAAMACHARA (KANNADA) 12 PM

**ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ** ಬೆಂಗಳೂರಿನ ಎಂಜಿನಿಯರ್ ಕಪಿಲ್ ಶರ್ಮಾ ಅವರ ಸಾಧನೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಇಂದು ಆಕಾಶವಾಣಿಯ, ಮನ್ ಕಿ ಬಾತ್ ನ 127ನೇ ಆವೃತ್ತಿಯಲ್ಲಿ ದೇಶದ ಜನತೆಯನ್ನುದ್ದೇಶಿಸಿ ಮಾತನಾಡಿದ ಅವರು, ಕೆರೆಗಳನ್ನು ಪುನರುಜ್ಜೀವನಗೊಳಿಸುವ ಅಭಿಯಾನವನ್ನು ಕಪಿಲ್ ಶರ್ಮಾ ಪ್ರಾರಂಭಿಸಿದ್ದಾರೆ. ಅವರ ತಂಡವು ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ 40 ಬಾವಿಗಳು ಮತ್ತು ಆರು ಕೆರೆಗಳನ್ನು ಪುನರುಜ್ಜೀವನಗೊಳಿಸಿದೆ. ತಮ್ಮ ಧ್ಯೇಯ ಸಾಧನೆಗೆ ಅವರು, ಉದ್ದಿಮೆಗಳು ಮತ್ತು ಸ್ಥಳೀಯ ನಿವಾಸಿಗಳನ್ನು ಸಹ ತೊಡಗಿಸಿಕೊಂಡಿರುವುದು ಗಮನಾರ್ಹ ಸಂಗತಿಯಾಗಿದೆ. ಅವರ ಸಂಘಟನೆಯು ಮರ ನೆಡುವ ಅಭಿಯಾನಗಳಲ್ಲಿಯೂ ತೊಡಗಿಸಿಕೊಂಡಿದೆ. ಬೆಂಗಳೂರಿನ ಈ ಸ್ಫೂರ್ತಿದಾಯಕ ಉದಾಹರಣೆ, ದೃಢನಿಶ್ಚಯವಿದ್ದಾಗ ಬದಲಾವಣೆ ಖಂಡಿತ ಸಾಧ್ಯ ಎಂದು ಸಾಬೀತುಪಡಿಸುತ್ತದೆ ಎಂದು ಹೇಳಿದರು.

ಸಸ್ಯಗಳು ಮತ್ತು ಮರ–ಗಿಡಗಳಲ್ಲಿ ವಿಶೇಷ ಗುಣವಿದೆ. ಯಾವುದೇ ಸ್ಥಳದಲ್ಲಿರಲಿ, ಅವು ಪ್ರತಿಯೊಂದು ಜೀವಿಯ ಒಳಿತಿಗಾಗಿ ಕೊಡುಗೆ ನೀಡುತ್ತವೆ. ಅದಕ್ಕಾಗಿಯೇ ನಮ್ಮ ಧರ್ಮ ಗ್ರಂಥಗಳಲ್ಲಿ, ಎಂದಿಗೂ ಯಾರನ್ನೂ ನಿರಾಶೆಗೊಳಿಸದ ಮರಗಳು ಮತ್ತು ಸಸ್ಯಗಳೇ ಧನ್ಯ. ನಾವು ಯಾವುದೇ ಪ್ರದೇಶದಲ್ಲಿ ವಾಸಿಸಲಿ, ಮರಗಳನ್ನು ನೆಡಬೇಕು ಎಂದು ಹೇಳಲಾಗಿದೆ. 'ಏಕ ಪೇಡ ಮಾ ಕೆ ನಾಮ್' ಅಭಿಯಾನವನ್ನು ನಾವು ಮುಂದುವರಿಸಬೇಕು ಎಂದರು. ವಿಶ್ವದಾದ್ಯಂತ ಭಾರತದ ಕಾಫಿ ಬಹಳ ಜನಪ್ರಿಯವಾಗುತ್ತಿದೆ. ಕರ್ನಾಟಕದ ಚಿಕ್ಕಮಗಳೂರು, ಕೊಡಗು ಮತ್ತು ಹಾಸನ, ತಮಿಳುನಾಡಿನಲ್ಲಿ ಪುಲನಿ, ಶೆವರಾಯ್, ನೀಲಗಿರಿ ಮತ್ತು ಅಣ್ಣಾಮಲೈ ಪ್ರದೇಶಗಳು, ಕರ್ನಾಟಕ–ತಮಿಳುನಾಡು ಗಡಿಭಾಗದಲ್ಲಿನ ಬಿಳಿಗಿರಿ ಪ್ರದೇಶ ಅಥವಾ ಕೇರಳದ ವೈನಾಡು, ತಿರುವಾಂಕೂರ್ ಮತ್ತು ಮಲಬಾರ್ ವಿಭಾಗಗಳು, ಭಾರತದ ಕಾಫಿಯ ವೈವಿಧ್ಯತೆಯನ್ನು ವೀಕ್ಷಿಸಲು ಅದ್ಭುತವೆನಿಸುತ್ತವೆ. ನಮ್ಮ ದೇಶದ ಈಶಾನ್ಯ ಭಾಗವೂ ಕೂಡಾ ಕಾಫಿ ಕೃಷಿಯಲ್ಲಿ ಪ್ರಗತಿ ಸಾಧಿಸುತ್ತಿರುವ ಹಿನ್ನೆಲೆ, ಭಾರತೀಯ ಕಾಫಿಯ ಖ್ಯಾತಿ ಹೆಚ್ಚುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

**<><><>**

**ರಾಜ್ಯದ ಬಡತನ ರೇಖೆಗಿಂತ** ಕೆಳಗಿರುವ ಕಾರ್ಡ್‌ದಾರರಿಗೆ ಎಣ್ಣೆ, ಬೇಳೆ ಕಾಳುಗಳನ್ನು ವಿತರಿಸಲಾಗುವುದು ಎಂದು ಆಹಾರ ನಾಗರಿಕ ಪೂರೈಕೆ ಖಾತೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ. ಮೈಸೂರಿನ ವಸ್ತು–ಪ್ರದರ್ಶನ ಆವರಣದಲ್ಲಿ ಆಯೋಜಿಸಲಾಗಿದ್ದ ಆಹಾರ ಮಳಿಗೆ ಉದ್ಘಾಟಿಸಿ ನಂತರ ಮಾತನಾಡಿದ ಅವರು, ಈಗಾಗಲೇ ಬಿಪಿಎಲ್ ಕಾರ್ಡ್ ದಾರರಿಗೆ ತಲಾ 10 ಕೆಜಿ ಅಕ್ಕಿ ವಿತರಿಸಲಾಗುತ್ತಿದ್ದು ಅದರಲ್ಲಿ 5 ಕೆಜಿ ಅಕ್ಕಿಯ ಬದಲು ಎಣ್ಣೆ, ಬೇಳೆ ಕಾಳುಗಳನ್ನು ವಿತರಿಸಲು ತೀರ್ಮಾನಿಸಲಾಗಿದೆ. ಮುಂದಿನ ತಿಂಗಳಿನಿಂದ ಈ ಯೋಜನೆ ಜಾರಿಗೊಳ್ಳಲಿದೆ. ಕಾರ್ಡ್‌ದಾರರ ಬೇಡಿಕೆಗೆ ಅನುಗುಣವಾಗಿ ಅಕ್ಕಿಯ ಬದಲು ಪೌಷ್ಟಿಕಾಂಶಯುಕ್ತ ಬೇಳೆಕಾಳು ಹಾಗೂ ಎಣ್ಣೆ ವಿತರಿಸಲಾಗುವುದು. ರಾಜ್ಯದಲ್ಲಿ 4 ಕೋಟಿ 50 ಲಕ್ಷ ಫಲಾನುಭವಿಗಳಿದ್ದಾರೆ ಎಲ್ಲರಿಗೂ ಈ ಯೋಜನೆ ಅನುಷ್ಠಾನವಾಗಲಿದೆ ಎಂದರು ಈಗಾಗಲೇ ಫಲಾನುಭವಿಗಳು ತೆರಿಗೆದಾರರಾಗಿದ್ದರೆ ಹಾಗೂ 7 ಎಕರೆಗೂ ಹೆಚ್ಚು ಜಮೀನು ಹೊಂದಿದ್ದರೆ ಅಂಥವರ ಕಾರ್ಡ್‌ಗಳು ಬಿಪಿಎಲ್ ನಿಂದ ಎಪಿಎಲ್ ಗೆ ವರ್ಗಾಯಿಸಲಾಗುವುದು. ಒಂದು ವೇಳೆ ಲೋಪದೋಷ ಕಂಡುಬಂದಲ್ಲಿ ಸ್ಥಳೀಯ ತೆಹಸೀಲ್ದಾರ್ ರನ್ನು ಭೇಟಿಯಾಗಿ ಸರಿಪಡಿಸಿಕೊಳ್ಳಬಹುದು ಎಂದು ತಿಳಿಸಿದರು.

**<><><>**

**ಮೈಸೂರಿನಲ್ಲಿ ಇಂದು ಬೆಳಗ್ಗೆ** ಕರ್ನಾಟಕ ಅಂಚೆ ಇಲಾಖೆ ಆಯೋಜಿಸಿದ್ದ ಭಾರತ ಅಂಚೆ ಮೈಸೂರು ಮ್ಯಾರಥಾನ್ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು. ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಮ್ಯಾರಥಾನ್ ನಲ್ಲಿ ಭಾಗಿಯಾಗಿದ್ದರು. ಬೆಳಗ್ಗೆ ನಡೆದ ಮ್ಯಾರಥಾನ್ ಮೈಸೂರಿನ ನಜರ್ಬಾದನಲ್ಲಿರುವ ಅಂಚೆ ಇಲಾಖೆಯ ಮುಖ್ಯ ಕಚೇರಿಯಿಂದ ಚಾಮುಂಡಿ ಬೆಟ್ಟ ಸೇರಿದಂತೆ ವಿವಿಧ ರಸ್ತೆಗಳಲ್ಲಿ ಮ್ಯಾರಥಾನ್ ಹೊರಡಲು ವ್ಯವಸ್ಥೆ ಮಾಡಲಾಗಿತ್ತು, ಈ ಮ್ಯಾರಥಾನ್‌ನಲ್ಲಿ ಸ್ಥಳಿಯರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ, ವಿವಿಧ ವಯೋಮಾನದವರು ಪಾಲ್ಗೊಂಡಿದ್ದರು.

**<><><>**

**ಯುವಜನತೆ ಕ್ರೀಡಾ** ಮನೋಭಾವವನ್ನು ಅಳವಡಿಸಿಕೊಂಡಲ್ಲಿ, ಶಾರೀರಿಕ, ಮಾನಸಿಕ ಸುದೃಢತೆ ಹಾಗೂ ನಾಯಕತ್ವ ಗುಣಗಳು ಬೆಳೆಯುತ್ತವೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದ್ದಾರೆ. ಗದಗನ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲಾಮಟ್ಟದ ಪದವಿ ಪೂರ್ವ ಮಹಾವಿದ್ಯಾಲಯಗಳ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

**<><><>**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

**<><><>**